**ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ– ಗ್ರೇಡ್–1 ಹುದ್ದೆಗಳಿಗೆ ಸಂಬಂಧ ದಿನಾಂಕ 29.01.2017 ರಂದು ನಡೆಯಲಿರುವ ಪರೀಕ್ಷೆಯ ಸೂಚನೆಗಳು**

---

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ– ಗ್ರೇಡ್–1 ಹುದ್ದೆಗಳಿಗೆ ಅರ್ಜಿ ಸಲ್ಲಿಸುವಾಗ ಒಂದೇ ಅರ್ಜಿಯಲ್ಲಿ 02 ಹುದ್ದೆಗಳನ್ನು ನಮೂದಿಸಲು ಅವಕಾಶ ನೀಡಲಾಗಿತ್ತು. ಅದರಂತೆ ಒಬ್ಬ ಅಭ್ಯರ್ಥಿ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ. ಇಷ್ಟಿದ್ದರೂ ಕೆಲವೊಂದು ಅಭ್ಯರ್ಥಿಗಳು ವಿವಿಧ ಕಾರಣಗಳಿಂದ ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿರುವುದು ಕಂಡು ಬಂದಿರುತ್ತದೆ. ಅದರಂತೆ ಪ್ರವೇಶ ಪತ್ರವನ್ನು ಪಡೆಯಲು ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿದ್ದಲ್ಲಿ, ಶುಲ್ಕ ಪಾವತಿಸಿರುವ ಇತ್ತೀಚಿನ ಅರ್ಜಿ ಅನುಸಾರ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕಾಗಿರುತ್ತದೆ. ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿದ್ದರೂ ಪ್ರವೇಶ ಪತ್ರ ಮಾತ್ರ ಒಂದೇ ಆಗಿರುತ್ತದೆ. ಯಾವುದೇ ಅಭ್ಯರ್ಥಿಯು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ– ಗ್ರೇಡ್–1 ಎರಡೂ ಹುದ್ದೆಗಳಿಗೆ ಪ್ರತ್ಯೇಕ ಅರ್ಜಿ ಸಲ್ಲಿಸಿದ್ದಲ್ಲಿ, ನಿಗಧಿತ ಶುಲ್ಕ ಪಾವತಿ ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಯನ್ನು ಎರಡೂ ಹುದ್ದೆಗಳಿಗೆ ಪರಿಗಣಿಸಲಾಗುವುದು. ಕೇವಲ ಒಂದೇ ಪ್ರವೇಶ ಪತ್ರ ಪಡೆದಿದ್ದಲ್ಲಿ ಇನ್ನೊಂದು ಹುದ್ದೆಗೆ ಪರಿಗಣಿಸುವುದಿಲ್ಲ ಎಂಬ ಭಾವನೆ ಕೆಲವು ಅಭ್ಯರ್ಥಿಗಳಲ್ಲಿ ಇರುತ್ತದೆ. ಆದ್ದರಿಂದ ಯಾವುದೇ ಅಭ್ಯರ್ಥಿ ಎರಡು ಹುದ್ದೆಗಳಿಗೆ ಅರ್ಜಿ ಸಲ್ಲಿಸಿ, ನಿಗಧಿತ ಶುಲ್ಕ ಪಾವತಿ ಮಾಡಿದ್ದಲ್ಲಿ ಒಂದೇ ಪ್ರವೇಶ ಪತ್ರವನ್ನು ಎರಡೂ ಹುದ್ದೆಗಳಿಗೆ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಅಭ್ಯರ್ಥಿಗಳು ಗಾಬರಿಯಾಗ ಬೇಕಾಗಿಲ್ಲ.

ಆಡಳಿತಾಧಿಕಾರಿ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ